**AUGUST 12,2024**
**ALL INDIA RADIO- DHARWAD**
**PRADESH SAMACHARA (KANNADA) 7:05 AM**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದುತ್ತಿರುವವರು: ವಿವೇಕಾದಿತ್ಯ ಕನಿಯಾಲ**

<><><>

**ಮುಖ್ಯಾಂಶಗಳು:**

- **ಭಾರತೀಯ ಕೃಷಿ ಸಂಶೋಧನಾ ಪರಿಷತ್ ಅಭಿವೃದ್ಧಿ ಪಡಿಸಿದ, 109 ಹೊಸ ತಳಿಗಳು, ಪ್ರಧಾನಮಂತ್ರಿಯವರಿಂದ ಬಿಡುಗಡೆ.**
- **ಮಾನವ ಮತ್ತು ಆನೆ ಸಂಘರ್ಷ ನಿರ್ವಹಣೆ; ಇಂದು ಬೆಂಗಳೂರಿನಲ್ಲಿ ಅಂತಾರಾಷ್ಟ್ರೀಯ ಸಮ್ಮೇಳನ – ಈಶ್ವರ ಖಂಡ್ರೆ.**
- **ಚಿಕ್ಕಮಗಳೂರು ಜಿಲ್ಲೆಯಲ್ಲಿ, ಭೂ ಕುಸಿತದ ಸರ್ಜಿಕಲ್ ಸರ್ವೇ ಕಾರ್ಯ ಆರಂಭ.**
- **ತುಂಗಭದ್ರಾ ಜಲಾಶಯದ ಕ್ರಸ್ಟ್ ಗೇಟ್ ಸರಪಳಿ ದುರಸ್ಥಿ ಆರಂಭ – ಡಿ.ಕೆ.ಶಿವಕುಮಾರ, ಮಾಹಿತಿ.**

<><><>

**ಈಗ ವಾರ್ತೆಗಳ ವಿವರ**

<><><>

**ಭಾರತೀಯ ಕೃಷಿ ಸಂಶೋಧನಾ ಪರಿ ’ತ್ತಿನ ವಿಜ್ಞಾನಿಗಳು ಅಭಿವೃದ್ಧಿಪಡಿಸಿದ, ಅಧಿಕ ಇಳುವರಿ ನೀಡುವ, ಹವಾಮಾನ ಸ್ಥಿರತೆ ಹೊಂದಿದ, ಜೈವಿಕ ಸಂವರ್ಧಿತ 61 ಬೆಳೆಗಳ 109 ತಳಿಗಳನ್ನು, ಹೊಸ ದಿಲ್ಲಿಯ ಕೃಷಿ ಸಂಶೋಧನಾ ಸಂಸ್ಥೆಯಲ್ಲಿ, ಪ್ರಧಾನಮಂತ್ರಿ ನರೇಂದ್ರ ಮೋದಿ ಬಿಡುಗಡೆ ಮಾಡಿದರು.**

**109 ತಳಿಗಳ ಪೈಕಿ, 34 ತಳಿಗಳು ಕೃಷಿ ಬೆಳೆಗಳಾಗಿದ್ದು, 27 ಅರಣ್ಯ ಬೆಳೆಗಳಾಗಿವೆ. ಬಳಿಕ ಅವರು, ರೈತರು ಮತ್ತು ವಿಜ್ಞಾನಿಗಳೊಂದಿಗೆ ಸಂವಾದ ನಡೆಸಿದರು.**

<><><>

ಬೆಂಗಳೂರಿನ ಹೆಸರುಘಟ್ಟದ ಭಾರತೀಯ ಸಂಶೋಧನಾ ಸಂಸ್ಥೆಯ ಡಾಕ್ಟರ್ ಜಿ.ಎಸ್. ರಂಧವ ಸಭಾಂಗಣದಲ್ಲಿ, ವಿಶೇಷ 13 ತಳಿಗಳ ಪರಿಚಯಾತ್ಮಕ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು.

ಸಂಸ್ಥೆಯ ನಿರ್ದೇಶಕ ತು ಾರ್ ಕಾಂತಿ ಬೆಹರಾ, ತುಮಕೂರಿನ ಹಿರೇಹಳ್ಳಿಯ ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ಡಾಕ್ಟರ್ ಲೋಗಾನಂದನ್ ಪ್ರಧಾನಮಂತ್ರಿಗಳು ಬಿಡುಗಡೆ ಮಾಡಿದ ತಳಿಗಳ ವಿಶೇಷತೆಯನ್ನು, ರೈತರಿಗೆ ವಿವರಿಸಿದರು.

<><><>

ಹವಾಮಾನ ಆಧಾರಿತ ಬಹು ವಾರ್ಷಿಕ ತೋಟಗಾರಿಕೆ ಬೆಳೆಗಳಾದ ಅಡಕೆ, ದಾಳಿಂಬೆ ಮತ್ತು ಮಾವು ಬೆಳೆಗಳ ಬೆಳೆ ವಿಮೆ ನೊಂದಣಿ ಅವಧಿಯನ್ನು, ಈ ತಿಂಗಳ 16 ರ ವರೆಗೆ ವಿಸ್ತರಿಸಲಾಗಿದೆ.

<><><>

ಹಾವೇರಿ ಜಿಲ್ಲೆ ಬೆಳೆ ಸಮೀಕ್ಷೆ ಮಾಹಿತಿಯಲ್ಲಿ ಸಮಸ್ಯೆಗಳಿದ್ದರೆ, ಆಕ್ಷೇಪಣೆ ಸಲ್ಲಿಸಲು ಈ ತಿಂಗಳ 18ರ ವರೆಗೆ ಅವಕಾಶ ಕಲ್ಪಿಸಲಾಗಿದೆ ಎಂದು, ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ ತಿಳಿಸಿದ್ದಾರೆ.

<><><>

ಇಂದು ಆನೆಗಳ ವಿಶ್ವ ದಿನ. ನಿಸರ್ಗದ ತೋಟಿಗರಾದ ಆನೆಗಳ ಆವಾಸ ಸ್ಥಾನ, ವಿಹಾರದ ಕಾರಿಡಾರ್ ಸಂರಕ್ಷಣೆ ಸೇರಿದಂತೆ, ಸೆರೆ ಹಿಡಿದು ಪಳಗಿಸಲಾದ ಆನೆಗಳ ಯೋಗಕ್ಷೇಮ ಕುರಿತು, ಜನ ಜಾಗೃತಿ ಮೂಡಿಸುವ ದಿನವಾಗಿ ಆಚರಿಸಲ್ಪಡುತ್ತದೆ. ದುಬಾರೆ ಮತ್ತು ಸಕ್ರೆಬೈಲು ಆನೆ ಶಿಬಿರಗಳಲ್ಲಿ ವಿಶೇಷ ಕಾರ್ಯಕ್ರಮ ಆಯೋಜಿಸಲಾಗಿದೆ.

<><><>

ಮಾನವ ಮತ್ತು ಆನೆ ಸಂಘರ್ಷ ನಿರ್ವಹಣೆಯ ಕುರಿತ, ಅಂತಾರಾಷ್ಟ್ರೀಯ ಸಮ್ಮೇಳನ, ಇಂದು ಬೆಳಗ್ಗೆ 10 ಗಂಟೆಗೆ, ಬೆಂಗಳೂರಿನ ಗಾಂಧಿ ಕೃಷಿ ವಿಜ್ಞಾನ ಕೇಂದ್ರ ಆವರಣದ, ಡಾಕ್ಟರ್ ಬಾಬು ರಾಜೇಂದ್ರ ಪ್ರಸಾದ್ ಅಂತಾರಾಷ್ಟ್ರೀಯ ಸಮಾವೇಶ ಭವನದಲ್ಲಿ ನಡೆಯಲಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, 500 ಕ್ಕೂ ಹೆಚ್ಚು ಜನ ತಜ್ಞರು, ಈ ಸಮಾವೇಶದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು, ಅರಣ್ಯ ಖಾತೆ ಸಚಿವ ಈಶ್ವರ ಖಂಡ್ರೆ ತಿಳಿಸಿದ್ದಾರೆ.

<><><>

ದಿಲ್ಲಿಯಲ್ಲಿ ನಡೆಯಲಿರುವ, 78ನೇ ಸ್ವಾತಂತ್ರ್ಯ ದಿನಾಚರಣೆ ಪ್ರಧಾನ ಕಾರ್ಯಕ್ರಮಕ್ಕೆ, ಕರ್ನಾಟಕದಿಂದ ವಿಶೇ ' ಅತಿಥಿಯಾಗಿ, ಎಚ್.ಆರ್. ಅಮಿತಾ ಅತ್ರೇಶ್ ತೆರಳಲಿದ್ದಾರೆ. ನೋಡಲ್ ಅಧಿಕಾರಿಯಾಗಿ ಅವರನ್ನು ನೇಮಕ ಮಾಡಲಾಗಿದೆ.

ಅಮಿತಾ ಅವರು, ಬೆಂಗಳೂರಿನ ಸಖಿ ಒನ್ ಸ್ಟಾಪ್ ಸೆಂಟರ್ ನಲ್ಲಿ ಕೇಂದ್ರ ಆಡಳಿತಾಧಿಕಾರಿಯಾಗಿ, ಕೆಲಸ ಮಾಡುತ್ತಿದ್ದಾರೆ.

ದೌರ್ಜನ್ಯಗಳಲ್ಲಿ ನೊಂದ ಮತ್ತು ಸಂಕ ್ಟದಲ್ಲಿರುವ ಮಹಿಳೆಯರಿಗೆ, ಒಂದೇ ಸೂರಿನಡಿ ಸಮಗ್ರ ಬೆಂಬಲ ಮತ್ತು ಸಹಾಯವನ್ನು ಒದಗಿಸುವ ನಿಟ್ಟಿನಲ್ಲಿ ಕೆಲಸ ಮಾಡುವ ಸಂಸ್ಥೆಯಾಗಿದೆ.

<><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಕರೆಯ ಮೇರೆಗೆ, 78ನೇ ಸ್ವಾತಂತ್ರ್ಯೋತ್ಸವದ ಹಿನ್ನೆಲೆ, ಹರ್ ಘರ್ ತಿರಂಗಾ ಹಾಗೂ ತಿರಂಗಾ ಯಾತ್ರೆ ಕಾರ್ಯಕ್ರಮ ಸಂಭ್ರಮದಿಂದ ದೇಶಾದ್ಯಂತ ನಡೆಯುತ್ತಿದೆ ಎಂದು, ಕೇಂದ್ರ ನವ ಹಾಗೂ ನವೀಕರಿಸಬಹುದಾದ ಇಂಧನಗಳ ಖಾತೆ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ.

ಹುಬ್ಬಳ್ಳಿಯ ದುರ್ಗದ ಬೈಲ್ ವೃತ್ತದಿಂದ ಚನ್ನಮ್ಮ ವೃತ್ತದ ವರೆಗೆ, ತಿರಂಗಾ ದ್ವಿಚಕ್ರ ವಾಹನ ಜಾಥಾಕ್ಕೆ ಚಾಲನೆ ನೀಡಿ ಮಾತನಾಡಿದರು.

ಪ್ರತಿಯೊಬ್ಬರೂ ಹರ್ ಘರ್ ತಿರಂಗಾ ಅಭಿಯಾನದಲ್ಲಿ ಭಾಗವಹಿಸಬೇಕು ಎಂದು ಸಾರ್ವಜನಿಕರಲ್ಲಿ ಸಚಿವರು ಮನವಿ ಮಾಡಿದರು.

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

<><><>

ಚಿಕ್ಕಮಗಳೂರು ಜಿಲ್ಲೆಯ ಮುಳ್ಳಯ್ಯನಗಿರಿ, ಕಳಸ, ಶೃಂಗೇರಿ ಭಾಗದ ಹಲವೆಡೆ ಇತ್ತೀಚೆಗೆ ಭೂ ಕುಸಿತ ಉಂಟಾದ ಹಿನ್ನೆಲೆ, ನಿಖರ ಕಾರಣ ಅರಿಯಲು, ರಾಜ್ಯ ಸರ್ಕಾರ ಜಿಲ್ಲೆಯಲ್ಲಿ, ಸರ್ಜಿಕಲ್ ಸರ್ವೇ ಕಾರ್ಯ ಆರಂಭಿಸಿದೆ.

ಮುಳ್ಳಯ್ಯನಗಿರಿ ಭಾಗದಲ್ಲಿ ಸಮೀಕ್ಷಾ ಕಾರ್ಯ ಆರಂಭಿಸಿರುವ ತಂಡ, ಜಿಲ್ಲಾಡಳಿತ ಗುರುತಿಸಿರುವ, ಸುಮಾರು 88 ಅಪಾಯಕಾರಿ ಸ್ಥಳಗಳಲ್ಲಿ ಸಮೀಕ್ಷೆ ಕೈಗೊಂಡು, ರಾಜ್ಯ ಸರ್ಕಾರಕ್ಕೆ ಶೀಘ್ರ ವರದಿ ಸಲ್ಲಿಸುವುದಾಗಿ, ತಜ್ಞರ ತಂಡದ ಮುಖ್ಯಸ್ಥರು ಮಾಹಿತಿ ನೀಡಿದರು.

<><><>

ಹಾಸನ ಜಿಲ್ಲೆ ಸಕಲೇಶಪುರ ತಾಲೂಕಿನ ದೊಡ್ಡನಾಗರ ಬಳಿ, ಗುಡ್ಡ ಕುಸಿದು ರೈಲ್ವೆ ಹಳಿ ಮೇಲೆ ಬಿದ್ದಿದ್ದ, ಮಣ್ಣಿನ ತೆರವು ಕಾರ್ಯಾಚರಣೆ ಪೂರ್ಣಗೊಂಡಿದೆ.

ಸತತ 30 ಗಂಟೆಗಳ ಕಾರ್ಯಾಚರಣೆಯಲ್ಲಿ, ನೂರಾರು ಕಾರ್ಮಿಕರು, ಮಣ್ಣನ್ನು ತೆರವುಗೊಳಿಸಿದರು.

ಗುಡ್ಡ ಕುಸಿದ ಪ್ರದೇಶದಲ್ಲಿ ಮರಳು ಚೀಲಗಳ ತಡೆಗೋಡೆ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗಿದ್ದು, ಸಂಪೂರ್ಣ ದುರಸ್ತಿ ಆದ ಬಳಿಕವೇ, ರೈಲುಗಳ ಸಂಚಾರಕ್ಕೆ ಅವಕಾಶ ಕಲ್ಪಿಸಲಾಗುವುದು ಎಂದು, ರೈಲ್ವೆ ಅಧಿಕಾರಿಳು ತಿಳಿಸಿದ್ದಾರೆ.

<><><>

ವಿಜಯನಗರ ಜಿಲ್ಲೆ, ಹೊಸಪೇಟೆಯ ತುಂಗಭದ್ರಾ ಜಲಾಶಯದ ಕ್ರಸ್ಟ್ ಗೇಟ್ ಸರಪಳಿ ತುಂಡಾದ ಘಟನೆ ಕುರಿತು, ಜಲ ಸಂಪನ್ಮೂಲ ಇಲಾಖೆಯ ಹಿರಿಯ ಅಧಿಕಾರಿಗಳಿಂದ, ಮುಖ್ಯಮಂತ್ರಿ ಸಿದ್ದರಾಮಯ್ಯ ಮಾಹಿತಿ ಪಡೆದುಕೊಂಡಿದ್ದಾರೆ.

ಅವರು, ನಾಳೆ ಮಂಗಳವಾರ, ಜಲಾಶಯಕ್ಕೆ ಭೇಟಿ ನೀಡಲಿದ್ದಾರೆ.

<><><>

ತುಂಗಭದ್ರಾ ಅಣೆಕಟ್ಟೆಯ 19ನೇ ಕ್ರಸ್ಟ್ ಗೇಟ್ ದುರಸ್ತಿಗೆ ಅನುಭವವುಳ್ಳ ಉನ್ನತ ಮಟ್ಟದ ತಂತ್ರಜ್ಞರನ್ನು ಕರೆಸಿಕೊಳ್ಳಲಾಗುತ್ತಿದೆ. ಈಗಾಗಲೇ ತುಂಗಭದ್ರಾ ನೀರಾವರಿ ನಿಗಮದ ಅತ್ಯುತ್ತಮ ತಂತ್ರಜ್ಞರು ಹಾಗೂ ತಜ್ಞ ಗುತ್ತಿಗೆದಾರ ಮೂರು ಸಂಸ್ಥೆಗಳು, ದುರಸ್ತಿ ಕಾರ್ಯದಲ್ಲಿ ತೊಡಗಿದ್ದಾರೆ ಎಂದು ಜಲಸಂಪನ್ಮೂಲ ಖಾತೆ ಸಚಿವ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ವಿಜಯನಗರ ಜಿಲ್ಲೆ ಹೊಸಪೇಟೆಯ ತುಂಗಭದ್ರಾ ಅಣೆಕಟ್ಟೆ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೊಪ್ಪಳ, ರಾಯಚೂರು, ಬಳ್ಳಾರಿ ಸೇರಿದಂತೆ, ಆಂಧ್ರಪ್ರದೇಶ, ತೆಲಂಗಾಣ ಮತ್ತು ಕರ್ನಾಟಕ ರಾಜ್ಯಗಳ ರೈತರಿಗೆ ಈ ಅಣೆಕಟ್ಟೆ ಜೀವನಾಡಿಯಾಗಿದೆ. ರಾಜ್ಯದ 12 ಲಕ್ಷ ಹೆಕ್ಟರ್ ಅಚ್ಚುಕಟ್ಟು ಪ್ರದೇಶದ ಒಂದು ಬೆಳೆಗಾದರೂ ನೀರನ್ನು ಉಳಿಸಿಕೊಳ್ಳುವ ಪ್ರಯತ್ನ ಮುಂದುವರೆದಿದೆ ಎಂದರು.

<><><>

ಚಿಕ್ಕಮಗಳೂರು ಜಿಲ್ಲೆ, ಶೃಂಗೇರಿಯಿಂದ ವಿಜಯನಗರ ಜಿಲ್ಲೆಯ ಕಿಷ್ಕಿಂಧೆ ವರೆಗೆ, 400 ಕಿಲೋ ಮಿಟರ್ ಉದ್ದದ, 'ನಿರ್ಮಲ ತುಂಗಭದ್ರಾ ಅಭಿಯಾನ' ಬರುವ ನವೆಂಬರ್ ತಿಂಗಳಲ್ಲಿ ನಡೆಯಲಿದೆ ಎಂದು, ಸ್ವಾಭಿಮಾನ ಆಂದೋಲನ ಸಮಿತಿಯ ರಾಷ್ಟ್ರೀಯ ಅಧ್ಯಕ್ಷ  ಬಸವರಾಜ ಪಾಟೀಲ, ತಿಳಿಸಿದ್ದಾರೆ.

ದಾವಣಗೆರೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು,  ತುಂಗಭದ್ರಾ ನದಿ ಶುದ್ಧೀಕರಣ ಮತ್ತು ಸ್ವಚ್ಛ ಪರಿಸರ ಕುರಿತು ಜಾಗೃತಿ ಮೂಡಿಸಲು, ಶಿವಮೊಗ್ಗದ ಪರ್ಯಾವರಣ ಟ್ರಸ್ಟ್ ಸಹಯೋಗದಲ್ಲಿ, ನಿರ್ಮಲ ತುಂಗಭದ್ರಾ ಆಂದೋಲನ ಆಯೋಜಿಸಲಾಗಿದೆ ಎಂದರು.

<><><>

ಹುಬ್ಬಳ್ಳಿಯ ನವನಗರದ, ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯ, ದಕ್ಷಿಣ ಕೋರಿಯಾದ ಸರ್ಕಾರೇತರ ಸಂಸ್ಥೆಯೊಂದಿಗೆ, ಒಡಂಬಡಿಕೆ ಮಾಡಿಕೊಂಡಿದ್ದು, 'ಶಾಂತಿ ಮತ್ತು ಸಾಮರಸ್ಯ' ವಿಷಯದಲ್ಲಿ, ಒಂದು ವ ’೯ ಅವಧಿಯ ಡಿಪ್ಲೊಮಾ ಕೋರ್ಸ್‌ನ್ನು ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ, ಪ್ರಾರಂಭಿಸಲಿದೆ ಎಂದು, ಉಪ ಕುಲಪತಿ ಪ್ರೊಫೆಸರ್ ಸಿ. ಬಸವರಾಜು, ಆಕಾಶವಾಣಿಗೆ ತಿಳಿಸಿದ್ದಾರೆ.

<><><>

ಉಪ ಕುಲಪತಿ ಪ್ರೊಫೆಸರ್ ಸಿ. ಬಸವರಾಜು ಧ್ವನಿ 32 ಸೆಕೆಂದುಗಳು

<><><>

ಭಾರತದ ಗ್ರಂಥಾಲಯ ಪಿತಾಮಹ, ಡಾಕ್ಟರ್ ಎಸ್.ಆರ್. ರಂಗನಾಥನ್ ಅವರ ಕೊಡುಗೆಗಳ ಸಂಸ್ಮರಣಾರ್ಥ, ಇಂದು ರಾಷ್ಟ್ರೀಯ ಗ್ರಂಥಪಾಲಕರ ದಿನ ಆಚರಿಸಲಾಗುತ್ತಿದೆ.

ರಾಷ್ಟ್ರೀಯ ಗ್ರಂಥಾಲಯ ಸಪ್ತಾಹದ ಅಂಗವಾಗಿ, ಬೆಂಗಳೂರಿನ ಅರಮನೆ ಮೈದಾನದ ತ್ರಿಪುರವಾಸಿನಿಯಲ್ಲಿ ಇಂದು ಸಂಜೆ, ಅರಿವು ಕೇಂದ್ರದ ಉದ್ಘಾಟನಾ ಕಾರ್ಯಕ್ರಮ ನಡೆಯಲಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 6 ಸಾವಿರದ 599 ಹೊಸ ಗ್ರಾಮ ಗ್ರಂಥಾಲಯಗಳನ್ನು ಘೋಷಣೆ ಮಾಡಲಿದ್ದು, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಮಾದರಿ ಅರಿವು ಕೇಂದ್ರದ ವಿನ್ಯಾಸ ಅನಾವರಣಗೊಳಿಸುವರು.

<><><>

ಕೊಡಗು ಜಿಲ್ಲೆಯಲ್ಲಿ, ಮುಂಗಾರು ಮಳೆಯ ಬಿರುಸು ಕಡಿಮೆಯಾಗಿದ್ದು, ಗ್ರಾಮೀಣ ಸೊಗಡಿನ ಕ್ರೀಡೆಗಳಿಗೆ, ಚಾಲನೆ ದೊರಕಿದೆ.

ರಾಜ್ಯ ಮಟ್ಟದ ಕೆಸರು ಗದ್ದೆ ಕ್ರೀಡಾಕೂಟ, ಮಡಿಕೇರಿ ಸಮೀಪ ಕಗ್ಗೋಡ್ಲುವಿನ ಗದ್ದೆಯಲ್ಲಿ ಸಂಭ್ರಮದಿಂದ ನಡೆಯಿತು.

ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಯೂತ್ ಹಾಸ್ಟೇಲ್ ಅಸೋಸಿಯೇಶನ್ ಆಫ್ ಇಂಡಿಯಾದ ಮಡಿಕೇರಿ ಘಟಕ, ಕೊಡಗು ಜಿಲ್ಲಾ ಯುವ ಒಕ್ಕೂಟ, ಈ ಕ್ರೀಡಾಕೂಟವನ್ನು ಆಯೋಜಿಸಿದ್ದವು.

ಪುರು ೯ ಮತ್ತು ಮಹಿಳೆಯರ ಹಗ್ಗ ಜಗ್ಗಾಟ, ವಾಲಿಬಾಲ್, ಮಹಿಳೆಯರಿಗೆ ಥ್ರೋಬಾಲ್, ಪ್ರೌಢ ಶಾಲಾ ಬಾಲಕಿಯರಿಗೆ ಥ್ರೋಬಾಲ್ ಪಂದ್ಯಾವಳಿ, ಪ್ರೌಢಶಾಲಾ ಬಾಲಕ-ಬಾಲಕಿಯರ ಹಗ್ಗಜಗ್ಗಾಟ ಸ್ಪರ್ಧೆಗಳು ನಡೆದವು.

<><><>

ರಾಜ್ಯದಲ್ಲಿ ನಿನ್ನೆ **202** ಜನರಿಗೆ ಡೆಂಘಿ ಜ್ವರ ದೃಢಪಟ್ಟಿದೆ. ಒಟ್ಟು ಸೋಂಕಿತರ ಸಂಖ್ಯೆ **21** ಸಾವಿರದ **186**ಕ್ಕೆ ಏರಿಕೆಯಾಗಿದೆ.

ಪ್ರಸ್ತುತ ತಮ್ಮ ಮನೆಗಳಲ್ಲಿ ಸಾವಿರದ **398** ಮಂದಿ ಹಾಗೂ **254** ಜನ ರಾಜ್ಯದ ವಿವಿಧ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಒಂದು ವರ್ಷದೊಳಗಿನ **401** ಹಾಗೂ **18** ವರ್ಷದೊಳಗಿನ **7** ಸಾವಿರದ **516** ಮಕ್ಕಳು ಡೆಂಘಿ ಪೀಡಿತರಾಗಿದ್ದಾರೆ.

ಧಾರವಾಡದಲ್ಲಿ **652** ಡೆಂಘಿ ಪ್ರಕರಣಗಳು ದೃಢಪಟ್ಟಿವೆ.

<><><>

ವಿಜಯಪುರದ ಐತಿಹಾಸಿಕ ಸ್ಮಾರಕಗಳಿಗೆ ಜಿಲ್ಲಾಧಿಕಾರಿ ಟಿ. ಭೂ ಬಾಲನ್ ಭೇಟಿ ನೀಡಿ, ವೀಕ್ಷಿಸಿದರು.

<><><>

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು:

- ಭಾರತೀಯ ಕೃಷಿ ಸಂಶೋಧನಾ ಪರಿಷತ್ ಅಭಿವೃದ್ಧಿ ಪಡಿಸಿದ, **109** ಹೊಸ ತಳಿಗಳು, ಪ್ರಧಾನಮಂತ್ರಿಯವರಿಂದ ಬಿಡುಗಡೆ.
- ಮಾನವ ಮತ್ತು ಆನೆ ಸಂಘರ್ಷ ನಿರ್ವಹಣೆ; ಇಂದು ಬೆಂಗಳೂರಿನಲ್ಲಿ ಅಂತಾರಾಷ್ಟ್ರೀಯ ಸಮ್ಮೇಳನ – ಈಶ್ವರ ಖಂಡ್ರೆ.
- ಚಿಕ್ಕಮಗಳೂರು ಜಿಲ್ಲೆಯಲ್ಲಿ, ಭೂ ಕುಸಿತದ ಸರ್ಜಿಕಲ್ ಸರ್ವೇ ಕಾರ್ಯ ಆರಂಭ.
- ತುಂಗಭದ್ರಾ ಜಲಾಶಯದ ಕ್ರಸ್ಟ್ ಗೇಟ್ ಸರಪಳಿ ದುರಸ್ಥಿ ಆರಂಭ – ಡಿ.ಕೆ.ಶಿವಕುಮಾರ, ಮಾಹಿತಿ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.